ಶ್ರೀ ಪಿ.ಜಿ.ಆರ್.ಸಿಂಧ್ಯಾ: ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಹಾವೇರಿ ವಿಭಾಗದ ಗ್ರಾಮಾಂತರ ಪ್ರದೇಶಗಳಲ್ಲಿ ಲೋಡ್ ಶೆಡ್ಡಿಂಗ್

1 (108)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ವಿದ್ಯುತ್ ಮಂಡಳಿಯ ಹಾವೇರಿ ವಿಭಾಗದ ಗ್ರಾಮಾಂತರ ಪ್ರದೇಶದಲ್ಲಿ ಎಷ್ಟು ತಾಸು ವಿದ್ಯುತ್ ಪೂರೈಸಲಾಗುತ್ತಿದೆ, ಹಾಗೂ ಯಾವ ರೀತಿಯ ಪೂರೈಕೆ ಮಾಡಲಾಗುತ್ತಿದೆ? (ವಿವರ ನೀಡುವುದು)

ಆ) ಇದನ್ನು ನಿವಾರಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಶರಣಬಸಪ್ಪ ದರ್ಶನಾಪುರ್ (ಇಂಧನ ರಾಜ್ಯ ಸಚಿವರು):

ಅ) ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ಹಾವೇರಿ ವಿಭಾಗದ ಗ್ರಾಮಾಂತರ ಪ್ರದೇಶಗಳಲ್ಲಿ ನಿರ್ವಹಿಸಲಾಗುತ್ತಿರುವ ಲೋಡ್ ಶೆಡ್ಡಿಂಗ್ ವಿವರಗಳು ಕೆಳಕಂಡಂತಿದೆ.

	ತಂಡ-1	ತಂಡ-2
ಬೆಳಿಗ್ಗೆ 6 ರಿಂದ ಮಧ್ಯಾಹ್ನ 12 ಗಂಟೆವರೆಗೆ	3 ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಇರುತ್ತದೆ	ವಿದ್ಯುತ್ ಸರಬರಾಜು ಇರುವುದಿಲ್ಲ.
ಮಧ್ಯಾಹ್ನ 12ರಿಂದ ಸಂಜೆ 6 ಗಂಟೆವರೆಗೆ	ವಿದ್ಯುತ್ ಸರಬರಾಜು ಇರುವುದಿಲ್ಲ.	3 ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಇರುತ್ತದೆ.
ಸಂಜೆ 6ರಿಂದ ರಾತ್ರಿ 10 ಗಂಟೆವರೆಗೆ	ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಇರುತ್ತದೆ.	ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಇರುತ್ತದೆ.
ರಾತ್ರಿ 10 ಗಂಟೆಯಿಂದ ಮಾರನೆಯ ದಿನ ಬೆಳಗಿನ ಜಾವ 2 ಗಂಟೆವರೆಗೆ	3 ಫೇಸ್‌ನಲ್ಲಿ ವಿದ್ಯುತ್ ಸರಬರಾಜು	ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು

ಬೆಳಗಿನ ಜಾವ 2 ಗಂಟೆಯಿಂದ 6 ಗಂಟೆಯವರೆಗೆ	ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು	3 ಫೇಸ್‌ನಲ್ಲಿ ವಿದ್ಯುತ್ ಸರಬರಾಜು.

ಆ) ಸದ್ಯದ ಪರಿಸ್ಥಿತಿಯಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಲೋಡ್ ಶೆಡ್ಡಿಂಗ್‌ನ ನಿರ್ವಹಣೆ ಅನಿವಾರ್ಯವಾಗಿದೆ. ವಿದ್ಯುತ್ ಬೇಡಿಕೆಯನ್ನು ವಿದ್ಯುತ್‌ಯೊಂದಿಗೆ ಸರಿದೂಗಿಸಲು ಲೋಡ್‌ಶೆಡ್ಡಿಂಗನ್ನು ನಿರ್ವಹಿಸಬೇಕಾಗಿದೆ. ಆದಾಗ್ಯೂ, ವಿದ್ಯುತ್ ಲಭ್ಯತೆಯ ಪ್ರಮಾಣನ್ನು ಹೆಚ್ಚಿಸಿಕೊಳ್ಳುವ ಸಲುವಾಗಿ ನೆರೆ ರಾಜ್ಯವಾದ ಮಹಾರಾಷ್ಟ್ರದಿಂದ ವಿದ್ಯುತ್ ನೆರವನ್ನು ಪಡೆಯಲು ಪ್ರಯತ್ನ ಮಾಡಲಾಗುತ್ತಿದೆ.

ತುಂಗಾ ಮೇಲ್ದಂಡೆ ಯೋಜನೆ

2 (107)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಬೃಹತ್ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಾ ಮೇಲ್ದಂಡೆ ಯೋಜನೆಯಲ್ಲಿ ಪ್ರಸ್ತುತ ಏನು ಬದಲಾವಣೆ ಮಾಡಲಾಗಿದೆ, ಇದರಿಂದ ಯೋಜನೆಯ ವೆಚ್ಚದಲ್ಲಿ ಆಗಿರುವ ಬದಲಾವಣೆ ಎಷ್ಟು?

ಆ) ಬದಲಾವಣೆಯ ಯೋಜನೆ ಈಗ ಯಾವ ಹಂತದಲ್ಲಿದೆ?

ಇ) 1997-98ನೇ ಸಾಲಿನಲ್ಲಿ ಯಾವ ಯಾವ ಕೆಲಸಕ್ಕೆ ಎಷ್ಟು ಹಣ ನಿಗದಿಪಡಿಸಲಾಗಿತ್ತು, 31-1-98 ರವರೆಗೆ ಬಿಡುಗಡೆಗೊಂಡ ಹಾಗೂ ಖರ್ಚಾದ ಹಣ ಎಷ್ಟು?

ಈ) ಈ ಯೋಜನೆಯಿಂದ ಹಿರೇಕೆರೂರು ತಾಲ್ಲೂಕಿನಲ್ಲಿ ಯಾವ ಯಾವ ಗ್ರಾಮಗಳಲ್ಲಿ ಎಷ್ಟು ಎಕರೆ ನೀರಾವರಿ ಆಗುತ್ತದೆ?

ಶ್ರೀ ಕೆ.ಎನ್.ನಾಗೇಗೌಡ (ಬೃಹತ್ ನೀರಾವರಿ ಮಂತ್ರಿಗಳು):

ಅ) ಪರ್ಯಾಯ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಆ) ಉದ್ಭವಿಸುವುದಿಲ್ಲ.

ಇ) ಈ ವಿವರಗಳನ್ನು ಕೆಳಕಂಡಂತೆ ನೀಡಲಾಗಿದೆ: